**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ ನಡವಳಿಗಳು**

ವಿಷಯ: ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ದಿನಗೂಲಿ ಆಧಾರದ ಮೇಲೆ ಕರ್ತವ್ಯ ನಿರ್ವಹಿಸಿರುವವರಿಗೆ ಅನುದಾನ ಬಿಡುಗಡೆ ಮಾಡುವ ಕುರಿತು

ಉಲ್ಲೇಖ:
1. ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ:44:ಸೇಸ್ಥಅ:2013 ದಿ:22.02.2014
2. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/33/ಯುಇಸಿ/2014, ದಿ:14.11.2014
3. ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ:2:ಟಿಎಫ್‌ಪಿ:2020:2020-21 ದಿನಾಂಕ:28.04.2020
4. ಸರ್ಕಾರದ ಆದೇಶ ಸಂಖ್ಯೆ:ಇಡಿ:11;ಹೆಚ್‌ಪಿಸಿ:2020 ದಿನಾಂಕ:03.04.2020

--*--

**ಪ್ರಸ್ತಾವನೆ:**

ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಉಲ್ಲೇಖ(1)ರ ಸರ್ಕಾರದ ಆದೇಶದಲ್ಲಿ ದಿನಾಂಕ:10.04.2006ರಂದು 10 ವರ್ಷಗಳಿಗಿಂತ ಕಡಿಮೆ ಇಲ್ಲದಂತೆ ಸೇವೆ ಸಲ್ಲಿಸಿರುವ ದಿನಗೂಲಿ ನೌಕರರನ್ನು ಅವರು 60 ವರ್ಷಗಳ ವಯಸ್ಸು ಪೂರ್ಣವಾಗುವವರೆಗೂ ದಿನಗೂಲಿ ಆಧಾರದ ಮೇಲೆ ಮುಂದುವರಿಸಲು ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ. ಉಲ್ಲೇಖ(2)ರ ಸರ್ಕಾರದ ಆದೇಶದಲ್ಲಿ ಉಲ್ಲೇಖ (1)ರ ಸರ್ಕಾರದ ಅಧಿಸೂಚನೆಯನ್ವಯ ಈ ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ದಿನಗೂಲಿ ನೌಕರರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು 60 ವರ್ಷಗಳ ವಯಸ್ಸು ಪೂರ್ಣವಾಗುವವರೆಗೂ ದಿನಗೂಲಿ ಆಧಾರದ ಮೇಲೆ ಮುಂದುವರಿಸಲು ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ. ಉಲ್ಲೇಖ(3)ರ ಸರ್ಕಾರದ ಆದೇಶದಲ್ಲಿ 2020-21ನೇ ಸಾಲಿನ ಆಯವ್ಯಯದಲ್ಲಿ ಹಂಚಿಕೆ ಮಾಡಿರುವ ಅನುದಾನದಲ್ಲಿ ವೇತನ, ಇತರೆ ಕಛೇರಿ ವೆಚ್ಚ, ಗೌರವಧನ ಮತ್ತು ದಿನಗೂಲಿ/ಗುತ್ತಿಗೆ ಆಧಾರದ ಮೇರೆಗೆ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಏಪ್ರಿಲ್-2020 ಮಾಹೆಯ ವೇತನ ಪಾವತಿಗೆ ಅನುದಾನವನ್ನು ಬಿಡುಗಡೆ ಮಾಡಲು ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳಿಗೆ ಆರ್ಥಿಕ ಪ್ರತ್ಯಾಯೋಜನೆಯನ್ನು ನೀಡಿ ಆದೇಶ ಹೊರಡಿಸಲಾಗಿರುತ್ತದೆ. ಉಲ್ಲೇಖ(4)ರ ಸರ್ಕಾರದ ಆದೇಶದಲ್ಲಿ ಉಲ್ಲೇಖ (3)ರ ಸರ್ಕಾರದ ಆರ್ಥಿಕ ಪ್ರತ್ಯಾಯೋಜನೆ ಅನ್ವಯ ಅನುದಾನವನ್ನು ಬಿಡುಗಡೆ ಮಾಡಿ ಆದೇಶಿಸಲಾಗಿರುತ್ತದೆ.

ಪ್ರಸ್ತುತ ಇಲಾಖಾ ವ್ಯಾಪ್ತಿಯಡಿಯಲ್ಲಿ ಬರುವ 16 ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ವಿದ್ಯಾರ್ಥಿನಿಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ 18 ದಿನಗೂಲಿ ನೌಕರರಿಗೆ 2020-21ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 2202-03-103-2-01-034 ರಡಿಯಲ್ಲಿ ಒದಗಿಸಿರುವ ರೂ.926.00 ಲಕ್ಷಗಳ ಅನುದಾನದಲ್ಲಿ ಏಪ್ರಿಲ್-2020ರ ಮಾಹೆಯ ವೇತನ ಪಾವತಿಸುವ ಸಂಬಂಧ ಪ್ರಾಂಶುಪಾಲರುಗಳಿಗೆ ಅನುದಾನ ಬಿಡುಗಡೆ ಮಾಡಲು ಈ ಆದೇಶ.

**ಆದೇಶ ಸಂಖ್ಯೆ:ಕಾಶಿಇ/ಆಯವ್ಯಯ/ದಿ.ನೌ.ವೇ/08/2020-21, ಬೆಂಗಳೂರು, ದಿನಾಂಕ:13.05.2020**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ದಿನಗೂಲಿ ನೌಕರರ ಸೇವೆಯನ್ನು 60 ವರ್ಷಗಳ ವಯಸ್ಸು ಪೂರ್ಣವಾಗುವವರೆಗೂ ದಿನಗೂಲಿ ಆಧಾರದ ಮೇಲೆ ಮುಂದುವರಿಸಿ ಉಲ್ಲೇಖ(1) ಮತ್ತು (2)ರ ಸರ್ಕಾರದ ಅಧಿಸೂಚನೆಗಳಲ್ಲಿ ಆದೇಶಿಸಿರುವ ಹಿನ್ನಲೆಯಲ್ಲಿ ಈ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧದಲ್ಲಿನ ಅರ್ಹ ದಿನಗೂಲಿ ನೌಕರರುಗಳಿಗೆ ಏಪ್ರಿಲ್ -2020ರ ಮಾಹೆಯ ವೇತನವನ್ನು ಪಾವತಿಸುವ ಸಂಬಂಧ 2020-21ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ:2202-03-103-2-01-034ರಡಿಯಲ್ಲಿ **ಒಟ್ಟು ರೂ.3,73,698/-** (ರೂ. ಮೂರು ಲಕ್ಷದ ಎಪತ್ಮೂರು ಸಾವಿರದ ಆರುನೂರ ತೊಂಭತ್ತೆಂಟು ಮಾತ್ರ)ಗಳನ್ನು ಪಾವತಿಸುವ ಸಂಬಂಧ ಕಾಲೇಜಿನ ಪ್ರಾಂಶುಪಾಲರುಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆ.

**(ಮಾನ್ಯ ಆಯುಕ್ತರಿಂದ ಟಿಪ್ಪಣಿ ಅನುಮೋದಿಸಲ್ಪಟ್ಟಿದೆ)**

13/5/20

**ಕಾಲೇಜು ಶಿಕ್ಷಣ ನಿರ್ದೇಶಕರು**

**ಅನುದಾನ ಬಳಕೆಗೆ ಷರತ್ತುಗಳು :**

1. ಬಿಡುಗಡೆಗೊಳಿಸಿರುವ ಅನುದಾನವನ್ನು ನಿಯಮಾನುಸಾರ ಪರಿಶೀಲಿಸಿ ಬಿಡುಗಡೆಗೊಳಿಸಿರುವ ಉದ್ದೇಶಕ್ಕೆ ಚಾಲ್ತಿಯಲ್ಲಿರುವ ಎಲ್ಲಾ ನಿಯಮಗಳನ್ನು ಪಾಲಿಸಿ ಅದರನ್ವಯವೇ ಪಾವತಿಸುವುದು.
2. ಸದರಿ ಅನುದಾನವನ್ನು ಕೆ-2 ತಂತ್ರಾಂಶದಲ್ಲಿ ಕ್ಲೇಮ್ ಮಾಡತಕ್ಕದ್ದು.
3. ಅನುದಾನ ಬಳಕೆಯಾದ ನಂತರ ಕಡ್ಡಾಯವಾಗಿ ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸುವುದು.

**ಇವರಿಗೆ:**

1. ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಅಗತ್ಯ ಕ್ರಮಕ್ಕಾಗಿ.
2. ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರಕಛೇರಿ, ಬೆಂಗಳೂರು – ಅಂತರ್ಜಾಲದಲ್ಲಿ ಅಳವಡಿಸಲು ಕೋರಿದೆ.

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ದಿನಗೂಲಿ ನೌಕರರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ 2020-21ನೇ ಸಾಲಿನಲ್ಲಿ ಏಪ್ರಿಲ್-2020ರ ಮಾಹೆಗೆ ವೇತನ ಪಾವತಿಗೆ ಸಿಬ್ಬಂದಿವಾರು ಬಿಡುಗಡೆ ಮಾಡಬೇಕಾಗಿರುವ ಅನುದಾನದ ವಿವರ

**ಆದೇಶ ಸಂಖ್ಯೆ:ಕಾಶಿಇ/ಆಯವ್ಯಯ/ದಿ.ನೌ.ವೇ/08/2020-21, ಬೆಂಗಳೂರು, ದಿನಾಂಕ:13.05.2020ಕ್ಕೆ ಅನುಬಂಧ**

| ಕ್ರ.ಸಂ | ಸಿಬ್ಬಂದಿಯ ಹೆಸರು | ಕಾಲೇಜಿನ ಹೆಸರು | ಮಾಹೆ | ಬಿಡುಗಡೆ ಮಾಡಿರುವ ಅನುದಾನದ ಮೊತ್ತ |
|---|---|---|---|---|
| 1 | ಮೂರ್ತಿ.ವಿ.ಎಲ್, | ಸರ್ಕಾರಿ ವಿಜ್ಞಾನ ಕಾಲೇಜು, ಬೆಂಗಳೂರು | ಏಪ್ರಿಲ್ -2020 | 22393 |
| 2 | ನಾಗರಾಜ.ಎಂ, | ಸರ್ಕಾರಿ ಆರ್.ಸಿ. ಕಾಲೇಜು, ಬೆಂಗಳೂರು | ಏಪ್ರಿಲ್ -2020 | 22393 |
| 3 | ಶಿವರಾಮಯ್ಯ, | ಸರ್ಕಾರಿ ಕಲಾ ಕಾಲೇಜು, ಬೆಂಗಳೂರು | ಏಪ್ರಿಲ್ -2020 | 22393 |
| 4 | ಸಿದ್ದರಾಮಯ್ಯ.ಟಿ, | | ಏಪ್ರಿಲ್ -2020 | 22393 |
| 5 | ಬೆಟ್ಟಯ್ಯ.ಹೆಚ್, | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಸಿರಾ | ಏಪ್ರಿಲ್ -2020 | 19945 |
| 6 | ಗಂಗಮ್ಮ, | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಮಧುಗಿರಿ | ಏಪ್ರಿಲ್ -2020 | 19945 |
| 7 | ಜಯನರಸಿಂಹ ಮೂರ್ತಿ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕೊರಟಗೆರೆ | ಏಪ್ರಿಲ್ -2020 | 19945 |
| 8 | ಓಬಳೇಶಪ್ಪ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಪಾವಗಡ | ಏಪ್ರಿಲ್ -2020 | 19945 |
| 9 | ಶಿವಲಿಂಗಯ್ಯ.ಎಂ | ಮಹಾರಾಣಿ ಮಹಿಳಾ ಕಲಾ ಕಾಲೇಜು ಮೈಸೂರು | ಏಪ್ರಿಲ್ -2020 | 21169 |
| 10 | ಬಸಮ್ಮ | ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು ವಿದ್ಯಾರ್ಥಿನಿಲಯ, ಮೈಸೂರು | ಏಪ್ರಿಲ್ -2020 | 21169 |
| 11 | ನಾಗರಾಜೇಗೌಡ | ಸರ್ಕಾರಿ ಕಲಾ ಕಾಲೇಜು ಹಾಸನ | ಏಪ್ರಿಲ್ -2020 | 19945 |
| 12 | ಗಾಯಿತ್ರಿ ಎಂ.ಎಸ್ | ಸರ್ಕಾರಿ ಮಹಿಳಾ ಕಾಲೇಜು ಮಂಡ್ಯ | ಏಪ್ರಿಲ್ -2020 | 19945 |
| 13 | ಶಿವಾನಂದ.ಸಿ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಭದ್ರಾವತಿ | ಏಪ್ರಿಲ್ -2020 | 19945 |
| 14 | ನಂಜೇಗೌಡ | ಐ.ಡಿ.ಎಸ್.ಜಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಚಿಕ್ಕಮಂಗಳೂರು | ಏಪ್ರಿಲ್ -2020 | 19945 |
| 15 | ಮೂಕೇಶಪ್ಪ.ಎ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹಿರೇಕೆರೂರು | ಏಪ್ರಿಲ್ -2020 | 19945 |
| 16 | ರಂಗಣ್ಣ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಮಾನ್ವಿ | ಏಪ್ರಿಲ್ -2020 | 19945 |
| 17 | ಶಂಕರ ಅಡಿವೆಪ್ಪ | ಸರ್ಕಾರಿ ಕಾಲೇಜು ಕಲಬುರಗಿ | ಏಪ್ರಿಲ್ -2020 | 21169 |
| 18 | ಹಿರಗೆಪ್ಪ ರುಕ್ಕಪ್ಪಾ | | ಏಪ್ರಿಲ್ -2020 | 21169 |
| | | **ಒಟ್ಟು ಮೊತ್ತ** | | 3,73,698 |

**(ಒಟ್ಟು ರೂ.ಮೂರು ಲಕ್ಷದ ಎಪ್ಪತ್ತೂರು ಸಾವಿರದ ಆರುನೂರ ತೊಂಭತ್ತೆಂಟು ರೂಪಾಯಿಗಳು ಮಾತ್ರ)**

13/5/2020

**ಕಾಲೇಜು ಶಿಕ್ಷಣ ನಿರ್ದೇಶಕರು**